ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಗಮದಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ವಿವರ

ಶ್ರೀ ಶರಣಪ್ಪ ಮಟ್ಟೂರ(ಶಿಕ್ಷಕರ ಕ್ಷೇತ್ರ):-

1553 (1819) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಯಮಿತ ಕೇಂದ್ರ ಕಛೇರಿ, ಇಲ್ಲಿ ಎಷ್ಟು ಅಧಿಕಾರಿ/ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ; (ಹೆಸರು ಮತ್ತು ಹುದ್ದೆವಾರು ವಿವರ ನೀಡುವುದು)

(ಆ) ಸದರಿ ಬ್ಯಾಂಕ್‌ನಲ್ಲಿ ಹೈದ್ರಾಬಾದ್-ಕರ್ನಾಟಕ ಭಾಗಕ್ಕೆ ಸಂವಿಧಾನದ ಅನುಚ್ಛೇದ 371(ಜೆ) ರನ್ವಯ ನೇಮಕಾತಿಯಲ್ಲಿ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆಯೇ; (371(ಜೆ) ರನ್ವಯ ಪದೋನ್ನತಿ ಪಡೆದವರ ವಿವರಗಳನ್ನು ಹೆಸರು ಮತ್ತು ಹುದ್ದೆವಾರು ನೀಡುವುದು)

(ಇ) ಇಲ್ಲದಿದ್ದಲ್ಲಿ, ನಿಗಧಿಪಡಿಸದಿರಲು ಕಾರಣಗಳೇನು; ಮತ್ತು ಇದರಿಂದ ಅನುಚ್ಛೇದ 371 (ಜೆ) ಉಲ್ಲಂಘಿಸಿದಂತಾಗುವುದಿಲ್ಲವೇ ಹಾಗೂ ನೌಕರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೆ? (ವಿವರ ನೀಡುವುದು)